# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1463 (1708)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಕೃಷಿ ಸಚಿವರು

ವಿಷಯ : ರಾಜ್ಯದಲ್ಲಿರುವ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾನಿಲಯಗಳ ಕುರಿತು

(ಅ) ರಾಜ್ಯದಲ್ಲಿರುವ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು; ಅವುಗಳು ಯಾವುವು; ಇವುಗಳಿಗೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ಅವುಗಳ ವ್ಯಾಪ್ತಿಗೆ ಬರುವ ಜಿಲ್ಲೆಗಳು ಯಾವುವು; ಈ ಕೃಷಿ ವಿಶ್ವವಿದ್ಯಾನಿಲಯಗಳ ಅಧೀನದಲ್ಲಿ ಬರುವ ಕಾಲೇಜುಗಳ ಸಂಖ್ಯೆ ಎಷ್ಟು; ಅವು ಯಾವುವು; (ಕೃಷಿ ವಿಶ್ವವಿದ್ಯಾನಿಲಯವಾರು ವರ್ಷವಾರು ವಿವರ ನೀಡುವುದು)

(ಆ) ಕೃಷಿ ವಿಶ್ವವಿದ್ಯಾನಿಲಯದಲ್ಲಿ ನೀಡುವ ಡಿಪ್ಲೋಮಾ ಮತ್ತು ಪದವಿ ಕೋರ್ಸ್‌ಗಳು ಯಾವುವು; ಅವುಗಳಿಗೆ ಅಗತ್ಯವಾದ ವಿದ್ಯಾರ್ಹತೆಗಳು ಯಾವುವು ;

(ಇ) ಈ ಕೃಷಿ ವಿಶ್ವವಿದ್ಯಾನಿಲಯದ ಅಧೀನದಲ್ಲಿ ಬರುವ ಕೃಷಿ ಭೂಮಿಯ ವಿಸ್ತೀರ್ಣವೆಷ್ಟು; ಅವುಗಳಲ್ಲಿ ಬಳಕೆಯಾಗುತ್ತಿರುವ ಮತ್ತು ಬಳಕೆಯಾಗದಿರುವ ಭೂಮಿಯ ವಿಸ್ತೀರ್ಣವೆಷ್ಟು; ಬಳಕೆಯಾಗದಿರುವ ಕೃಷಿ ಭೂಮಿಯ ಸದ್ಬಳಕೆಗೆ ಕ್ರಮವೇನು; ಕೃಷಿ ವಿಶ್ವವಿದ್ಯಾನಿಲಯದ ಅಧೀನದ ಭೂಮಿಯನ್ನು ಖಾಸಗಿಯವರಿಗೆ ಹಾಗೂ ಸರಕಾರದ ಇತರ ಇಲಾಖೆಗೆ ಹಸ್ತಾಂತರಿಸಲಾಗಿದೆಯೇ; ಹೌದಾದರೆ, ಯಾವ ಉದ್ದೇಶಕ್ಕಾಗಿ ಎಷ್ಟು ಭೂಮಿಯನ್ನು, ಯಾವಾಗ ಮತ್ತು ಯಾರಿಗೆ ಹಸ್ತಾಂತರಿಸಲಾಗಿದೆ ?(ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)